Akashvani : Bengaluru
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

05.10.2025 : 7.35AM

*******

ಮುಖ್ಯಾಂಶಗಳು

೧. ಇದೇ ೮ ರಿಂದ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಎರಡು ದಿನಗಳ ಭಾರತ ಪ್ರವಾಸ; ಕಾರ್ಯತಂತ್ರ ಪಾಲುದಾರಿಕೆಯ ಪ್ರಗತಿ ಪರಿಶೀಲನೆ

೨. ಬಿಹಾರದ ಮಖಾನಾ, ಯುರೋಪ್ ಮತ್ತು ಇತರ ಏಷ್ಯಾ ರಾಷ್ಟ್ರಗಳಿಗೆ ರಫ್ತು ಮಾಡಲು ಯೋಜನೆ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್

೩. ೭ ರಿಂದ ೧೫ ವರ್ಷ ವಯಸ್ಸಿನ ಮಕ್ಕಳಿಗೆ ಆಧಾರ್ ಬಯೋಮೆಟ್ರಿಕ್ ನವೀಕರಣ ಶುಲ್ಕ ಮನ್ನಾ

೪. ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್; ಇಂದು ಭಾರತ - ಪಾಕಿಸ್ತಾನ ಹಣಾಹಣಿ

><><><><><

ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಇದೇ ೮ ರಿಂದ ಎರಡು ದಿನಗಳ ಭಾರತ ಪ್ರವಾಸ ಕೈಗೊಳ್ಳಲ್ಲಿದ್ದಾರೆ. ಇದು ಪ್ರಧಾನಿ ಸ್ಟಾರ್ಮರ್ ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಲಿದೆ. 'ವಿಷನ್ ೨೦೩೫' ಮಾರ್ಗಸೂಚಿಗೆ ಅನುಗುಣವಾಗಿ, ಅಕ್ಟೋಬರ್ ೯ ರಂದು ಮುಂಬೈನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ಬ್ರಿಟನ್ ಸಹವರ್ತಿ ಭಾರತ-ಬ್ರಿಟನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಅಡಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ ಎಂದು

ವಿದೇಶಾಂಗ ಸಚಿವಾಲಯ ತಿಳಿಸಿದೆ. ಇದು ವ್ಯಾಪಾರ ಮತ್ತು ಹೂಡಿಕೆ, ತಂತ್ರಜ್ಞಾನ ಮತ್ತು ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಹವಾಮಾನ ಮತ್ತು ಇಂಧನ, ಆರೋಗ್ಯ, ಶಿಕ್ಷಣ ಮತ್ತು ಜನರಿಂದ ಜನರ ಸಂಬಂಧಗಳಂತಹ ಪ್ರಮುಖ ಕ್ಷೇತ್ರಗಳಾದ್ಯಂತ ಕಾರ್ಯಕ್ರಮಗಳು ಮತ್ತು ಉಪಕ್ರಮಗಳ ಕೇಂದ್ರೀಕೃತ ೧೦ ವರ್ಷಗಳ ಮಾರ್ಗಸೂಚಿಯಾಗಿದೆ. ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದವು ಪ್ರಸ್ತುತಪಡಿಸುವ ಅವಕಾಶಗಳನ್ನು ಅನ್ವೇಷಿಸಲು ಇಬ್ಬರು ನಾಯಕರು ವ್ಯಾಪಾರ ಮತ್ತು ಉದ್ಯಮ ನಾಯಕರೊಂದಿಗೆ ತೊಡಗಿಸಿಕೊಳ್ಳಲಿದ್ದಾರೆ. ಇದು ಉಭಯ ದೇಶಗಳ ನಡುವಿನ ಭವಿಷ್ಯದ ಆರ್ಥಿಕ ಪಾಲುದಾರಿಕೆಯ ಪರಮುಖ ಅಂಶವಾಗಿ ಕಾರ್ಯನಿರ್ವಹಿಸಲಿದೆ. ನಾಯಕರು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ಮೋದಿ ಮತ್ತು ಪ್ರಧಾನಿ ಸ್ಟಾರ್ಮರ್ ಮುಂಬೈನಲ್ಲಿ ನಡೆಯಲಿರುವ ೬ ನೇ ಜಾಗತಿಕ ಫಿನ್‌ಟೆಕ್ ಉತ್ಸವದಲ್ಲಿ ಭಾಗವಹಿಸಲಿದ್ದಾರೆ. ಇದೇ ವೇಳೆ ಅವರು, ಉದ್ಯಮ ತಜ್ಞರು, ನೀತಿ ನಿರೂಪಕರು ಮತ್ತು ನಾವೀನ್ಯಕಾರರೊಂದಿಗೆ ಸಂವಹನ ನಡೆಸಲಿದ್ದಾರೆ.

><><><><

ಜಾಗತಿಕ ಆಹಾರವೆಂದು ಗುರುತಿಸಲ್ಪಟ್ಟ ಬಿಹಾರದ ಮಖಾನಾವನ್ನು ಅಮೆರಿಕ, ಕೆನಡಾ ಮತ್ತು ಅರಬ್ ರಾಷ್ಟ್ರಗಳ ಜೊತೆಗೆ ಯುರೋಪ್ ಮತ್ತು ಇತರ ಏಷ್ಯಾದ ದೇಶಗಳಿಗೆ ರಫ್ತು ಮಾಡಲಾಗುವುದು ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಘೋಷಿಸಿದ್ದಾರೆ. ಪಾಟ್ನಾದಲ್ಲಿ ನಡೆದ ಮಖಾನಾ ಉತ್ಸವದಲ್ಲಿ ಮಾತನಾಡಿದ ಅವರು, ಆಫ್ರಿಕನ್ ದೇಶಗಳಿಗೂ ರಫ್ತಿಗೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಮಖಾನಾ ಬಿಹಾರದ ಹೆಮ್ಮೆ ಮಾತ್ರವಲ್ಲದೆ ಭಾರತೀಯ

ಸಂಪ್ರದಾಯ, ಮೌಲ್ಯಗಳು ಮತ್ತು ರೈತರ ಕಠಿಣ ಪರಿಶ್ರಮದ ಸಂಕೇತವಾಗಿದೆ. ಮಖಾನಾ ಮತ್ತು ಅದರ ರೈತರಿಗೆ ಜಾಗತಿಕ ಮನ್ನಣೆಯನ್ನು ಖಚಿತಪಡಿಸಿಕೊಳ್ಳಲು ಕೃಷಿ ಸಚಿವಾಲಯ ಎಲ್ಲಾ ಬೆಂಬಲವನ್ನು ನೀಡಲಿದೆ ಎಂದು ಅವರು ಭರವಸೆ ನೀಡಿದರು.

><><><><

ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ - ಯುಐಡಿಎಐ, ೭ ರಿಂದ ೧೫ ವರ್ಷ ವಯಸ್ಸಿನ ಮಕ್ಕಳಿಗೆ ಆಧಾರ್ ಬಯೋಮೆಟ್ರಿಕ್ ನವೀಕರಣಗಳ ಶುಲ್ಕವನ್ನು ಮನ್ನಾ ಮಾಡಿದೆ.ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಪ್ರಸ್ತಾಪಿಸಿರುವ ವಯಸ್ಸಿನ ಗುಂಪಿಗೆ ಕಡ್ಡಾಯ ಬಯೋಮೆಟ್ರಿಕ್ ನವೀಕರಣ ಎಂಬಿಯು ಶುಲ್ಕಗಳ ಮನ್ನಾ ಈಗಾಗಲೇ ಅಕ್ಟೋಬರ್ ೧ ರಿಂದ ಜಾರಿಗೆ ಬಂದಿದೆ ಮತ್ತು ಒಂದು ವರ್ಷದ ಅವಧಿಗೆ ಜಾರಿಯಲ್ಲಿರುತ್ತದೆ ಎಂದು ತಿಳಿಸಿದೆ. ಈ ನಿರ್ಧಾರ ದೇಶಾದ್ಯಂತ ಸುಮಾರು ೬ ಕೋಟಿ ಮಕ್ಕಳಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ನಿರೀಕ್ಷಿಸಲಾಗಿದೆ.  ಐದು ವರ್ಷದೊಳಗಿನ ಮಕ್ಕಳಿಗೆ ಆಧಾರ್ ದಾಖಲಾತಿಗೆ ಹೆಸರು, ಛಾಯಾಚಿತ್ರ, ಹುಟ್ಟಿದ ದಿನಾಂಕ, ಲಿಂಗ ಮತ್ತು ವಿಳಾಸ ಸೇರಿದಂತೆ ಮೂಲಭೂತ ವಿವರಗಳು ಮಾತ್ರ ಬೇಕಾಗುತ್ತವೆ. ಬೆಳವಣಿಗೆಯ ಅಂಶಗಳಿಂದಾಗಿ ಬೆರಳಚ್ಚುಗಳು ಅಥವಾ ಐರಿಸ್ ಸ್ಕ್ಯಾನ್‌ಗಳಂತಹ ಬಯೋಮೆಟ್ರಿಕ್‌ಗಳನ್ನು ಸೆರೆಹಿಡಿಯಲಾಗುವುದಿಲ್ಲ. ಅಸ್ತಿತ್ವದಲ್ಲಿರುವ ನಿಯಮಗಳ ಪ್ರಕಾರ, ಮಗುವಿಗೆ ಐದು ವರ್ಷ ತುಂಬಿದಾಗ ಬೆರಳಚ್ಚುಗಳು, ಐರಿಸ್ ಮತ್ತು ನವೀಕರಿಸಿದ ಛಾಯಾಚಿತ್ರಗಳನ್ನು ಸೆರೆಹಿಡಿಯುವುದು ಸೇರಿದಂತೆ ಮೊದಲ ಕಡ್ಡಾಯ ಬಯೋಮೆಟ್ರಿಕ್ ನವೀಕರಣದ ಅಗತ್ಯವಿದೆ. ಮಗು ೧೫ ವರ್ಷ ತಲುಪಿದಾಗ ಎರಡನೇ ಕಡ್ಡಾಯ ಬಯೋಮೆಟ್ರಿಕ್ ನವೀಕರಣದ ಅಗತ್ಯವಿದೆ. ೫-೭ ಮತ್ತು ೧೫-೧೭ ವರ್ಷ ವಯಸ್ಸಿನವರಿಗೆ ಮೊದಲ ಮತ್ತು ಎರಡನೇ

ಆಧಾರ್ ಬಯೋಮೆಟ್ರಿಕ್ ನವೀಕರಣಗಳು ಉಚಿತವಾಗಿದೆ. ಇದರ ನಂತರ, ಪ್ರತಿ ಆಧಾರ್ ಬಯೋಮೆಟ್ರಿಕ್ ನವೀಕರಣಕ್ಕೆ ೧೨೫ ರೂಪಾಯಿಗಳ ನಿಗದಿತ ಶುಲ್ಕವನ್ನು ವಿಧಿಸಲಾಗುತ್ತದೆ.

><><><><

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇದೇ ೭ ರಂದು ವಿವಿಧ ರಾಜಕೀಯ ಪಕ್ಷಗಳ ನಾಯಕರೊಂದಿಗೆ ತಮ್ಮ ಮೊದಲ ಔಪಚಾರಿಕ ಸಂವಾದವನ್ನು ನಡೆಸಲಿದ್ದಾರೆ. ಸಂಸತ್ತಿನ ಚಳಿಗಾಲದ ಅಧಿವೇಶನ ಸಮೀಪಿಸುತ್ತಿರುವಾಗ, ಎಲ್ಲಾ ಪಕ್ಷಗಳಾದ್ಯಂತ ಸಂವಾದ ಮತ್ತು ಸಹಕಾರವನ್ನು ಬೆಳೆಸುವ ಉದ್ದೇಶವನ್ನು ಈ ಸಂವಾದ ಸೂಚಿಸುತ್ತದೆ. ಪ್ರಮುಖ ಆಹ್ವಾನಿತರಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸೇರಿದ್ದಾರೆ. ಸಂಸದೀಯ ವ್ಯವಹಾರಗಳ ರಾಜ್ಯ ಸಚಿವರಾದ ಅರ್ಜುನ್ ರಾಮ್ ಮೇಘವಾಲ್ ಮತ್ತು ಎಲ್. ಮುರುಗನ್ ಕೂಡ ಭಾಗವಹಿಸುವ ನಿರೀಕ್ಷೆಯಿದೆ. ಈ ಸಭೆ ಶಾಸಕಾಂಗ ಉತ್ಪಾದಕತೆಯನ್ನು ಹೆಚ್ಚಿಸುವುದು ಮತ್ತು ಪ್ರಮುಖ ರಾಷ್ಟ್ರೀಯ ವಿ?ಯಗಳ ಕುರಿತು ಒಮ್ಮತವನ್ನು ನಿರ್ಮಿಸುವತ್ತ ಗಮನಹರಿಸುತ್ತದೆ. ಉಪರಾಷ್ಟ್ರಪತಿ ರಾಧಾಕೃಷ್ಣನ್, ಮೇಲ್ಮನೆಯಲ್ಲಿ ರಚನಾತ್ಮಕ ಚರ್ಚೆ ಮತ್ತು ಪರಸ್ಪರ ಗೌರವದ ಮಹತ್ವವನ್ನು ಒತ್ತಿಹೇಳುವ ಸಾಧ್ಯತೆಯಿದೆ.

><><><><

ಗೋವಾದ ತಲೈಗಾವ್‌ನ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಒಳಾಂಗಣ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗೋವಾ ಸರ್ಕಾರದ ಪ್ರಮುಖ ಕಲ್ಯಾಣ ಉಪಕ್ರಮವಾದ 'ಮ್ಹಾಜೆ ಘರ್ ಯೋಜನೆ'ಗೆ ಚಾಲನೆ ನೀಡಿದರು. ಸರ್ಕಾರಿ

ಮತ್ತು ಸಮುದಾಯದ ಜಮೀನಿನಲ್ಲಿ ನಿರ್ಮಿಸಲಾದ ಮನೆಗಳನ್ನು ಸಕ್ರಮಗೊಳಿಸುವ ಮತ್ತು ದೀರ್ಘಕಾಲದಿಂದ ವಾಸಿಸುತ್ತಿರುವವರಿಗೆ ಮಾಲೀಕತ್ವದ ಹಕ್ಕುಗಳನ್ನು ನೀಡುವ ಗುರಿಯನ್ನು ಈ ಯೋಜನೆ ಹೊಂದಿದೆ. ೨ ಸಾವಿರದ ೪೫೨ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಸಚಿವರು ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಗೃಹ ಸಚಿವ ಅಮಿತ್ ಶಾ, 'ಮ್ಹಾಜೆ ಘರ್ ಯೋಜನೆ' ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಎನ್‌ಡಿಎ ಸರ್ಕಾರಗಳು ಕೈಗೊಂಡ ಸುಧಾರಣಾ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ. ಇದು ದಕ್ಷ ಮತ್ತು ಸೂಕ್ಷ್ಮ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ಬಣ್ಣಿಸಿದರು.

ಧ್ವನಿ- ಅಮಿತ್ ಶಾ

><><><><><

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ನೇತೃತ್ವದ ಚುನಾವಣಾ ಆಯೋಗವು ಇಂದು ಬಿಹಾರದ ಪಾಟ್ನಾದಲ್ಲಿ ಆದಾಯ ತೆರಿಗೆ ಇಲಾಖೆ, ಜಾರಿ ನಿರ್ದೇಶನಾಲಯ, ಬ್ಯಾಂಕುಗಳು, ರೈಲ್ವೆಗಳು, ವಿಮಾನ ನಿಲ್ದಾಣಗಳು ಮತ್ತು ಮಾದಕವಸ್ತು ನಿಯಂತ್ರಣ ಬ್ಯೂರೋ ಸೇರಿದಂತೆ ಇತರ ಅಧಿಕಾರಿಗಳನ್ನು ಭೇಟಿ ಮಾಡಲಿದೆ. ರಾಜ್ಯದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಸಿದ್ಧತೆಗಳನ್ನು ಪರಿಶೀಲಿಸಲು ಚುನಾವಣಾ ಆಯೋಗದ ತಂಡ ಬಿಹಾರಕ್ಕೆ ಎರಡು ದಿನಗಳ ಭೇಟಿಯಲ್ಲಿದೆ. ಈ ತಂಡ ಕೇಂದ್ರ ಮತ್ತು ರಾಜ್ಯ ಪೊಲೀಸ್ ಪಡೆಗಳ ನೋಡಲ್ ಅಧಿಕಾರಿಗಳು, ಪೊಲೀಸ್ ಮಹಾನಿರ್ದೇಶಕರು, ಮುಖ್ಯ ಕಾರ್ಯದರ್ಶಿ ಮತ್ತು ಇತರ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದೆ. ಚುನಾವಣಾ ಆಯೋಗದ ತಂಡ ನಿನ್ನೆ ಪಾಟ್ನಾದಲ್ಲಿ ೧೨ ಮಾನ್ಯತೆ ಪಡೆದ

ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿತು. ಸಭೆಯಲ್ಲಿ, ವಿವಿಧ ಪಕ್ಷಗಳು ಆಯೋಗದ ಮುಂದೆ ಹಲವಾರು ಪ್ರಮುಖ ವಿಷಯಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದವು.

><><><><

ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್‌ನಲ್ಲಿ, ಭಾರತದ ವನಿತೆಯರ ತಂಡ ಇಂದು ಕೊಲಂಬೊದ ಆರ್ ಪ್ರೇಮದಾಸ ಕ್ರೀಡಾಂಗಣದಲ್ಲಿ ಪಂದ್ಯಾವಳಿಯ ತನ್ನ ಎರಡನೇ ಪಂದ್ಯದಲ್ಲಿ ಪಾಕಿಸ್ತಾನವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಕ್ಕೆ ಆರಂಭವಾಗಲಿದೆ. ಭಾರತದ ವನಿತೆಯರು ಡಕ್ವರ್ತ್ ಲೂಯಿಸ್ ವಿಧಾನದ ಮೂಲಕ ಶ್ರೀಲಂಕಾವನ್ನು ೫೯ ರನ್‌ಗಳಿಂದ ಸೋಲಿಸಿ ತಮ್ಮ ಮೊದಲ ಪಂದ್ಯದಲ್ಲಿ ಜಯಗಳಿಸಿದರು. ಮತ್ತೊಂದೆಡೆ, ಪಾಕಿಸ್ತಾನವು ತನ್ನ ಮೊದಲ ಪಂದ್ಯದಲ್ಲಿ ಬಾಂಗ್ಲಾದೇಶದ ವಿರುದ್ಧ ಏಳು ವಿಕೆಟ್‌ಗಳ ಸೋಲನ್ನು ಅನುಭವಿಸಿತು. ಭಾರತವು ಪಾಕಿಸ್ತಾನದ ವಿರುದ್ಧ ಏಕದಿನ ಪಂದ್ಯಗಳಲ್ಲಿ ೧೧-೦ ಗೆಲುವಿನ ದಾಖಲೆಯನ್ನು ಹೊಂದಿದೆ. ಭಾರತಕ್ಕೆ, ಈ ಪಂದ್ಯ ಸೆಮಿಫೈನಲ್ ಅರ್ಹತೆಯತ್ತ ಒಂದು ಹೆಜ್ಜೆಯಾಗಿದೆ.

><><><><

ಭಾರತದ ಉದಯೋನ್ಮುಖ ಶಟ್ಲರ್‌ಗಳಾದ ತಸ್ನಿಮ್ ಮಿರ್ ಮತ್ತು ಶ್ರೀಯಾನ್ಶಿ ವಾಲಿಶೆಟ್ಟಿ ಇಂದು ಅಬುಧಾಬಿಯ ಖಲೀಫಾ ಬಿನ್ ಜಾಯೆದ್ ಕ್ರೀಡಾಂಗಣದಲ್ಲಿ ನಡೆಯಲಿರುವ ಅಲ್ ಐನ್ ಮಾಸ್ಟರ್ಸ್ ೨೦೨೫ ಬ್ಯಾಡ್ಮಿಂಟನ್ ಪಂದ್ಯಾವಳಿಯ  ಮಹಿಳಾ ಸಿಂಗಲ್ಸ್ ಫೈನಲ್‌ನಲ್ಲಿ ಪರಸ್ಪರ ಎದುರಾಗಲಿದ್ದಾರೆ.  ಪುರುಷರ ಡಬಲ್ಸ್‌ನಲ್ಲಿ, ಭಾರತದ ಹರಿಹರನ್ ಅಂಸಕರುಣನ್ ಮತ್ತು ಅರ್ಜುನ್ ಮದತಿಲ್ ರಾಮಚಂದ್ರನ್ ಜೋಡಿ ಇಂದು ಫೈನಲ್‌ನಲ್ಲಿ ಇಂಡೋನೇಷ್ಯಾದ ರೇಮಂಡ್ ಇಂದ್ರ

ಮತ್ತು ನಿಕೋಲಸ್ ಜೋಕ್ವಿನ್ ಜೋಡಿಯನ್ನು ಎದುರಿಸಲಿದೆ. ಇದಕ್ಕೂ ಮೊದಲು, ನಿನ್ನೆ ನಡೆದ ಪುರುಷರ ಸಿಂಗಲ್ಸ್ ಸೆಮಿಫೈನಲ್‌ನಲ್ಲಿ ಭಾರತದ ಕಿಡಂಬಿ ಶ್ರೀಕಾಂತ್ ಮಲೇಷ್ಯಾದ ಯುವ ಆಟಗಾರ ಐದಿಲ್ ಶೋಲೆಹ್ ವಿರುದ್ಧ ಸೋಲನ್ನು ಅನುಭವಿಸಿದರು.

><><><><